145ನೇ ಅಧಿವೇಶನ
ನಿ-330
ಕ್ರ-92
ರಂಗನಾಥ

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸಿ.ಎಂ.ಇಬ್ರಾಹಿಂ ಇವರು ನಿಯಮ 330 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಮುಖ್ಯಮಂತ್ರಿಯವರ ಹೇಳಿಕೆ.

ಪ್ರಶ್ನೆ:-

ಬೆಂಗಳೂರು ಉತ್ತರ ತಾಲ್ಲೂಕು, ನಾಗವಾರ ಮತ್ತು ಅದರ ಸುತ್ತಮುತ್ತಲಲ್ಲಿ ಅನಧಿಕೃತ ಲೇಔಟ್ ಗಳನ್ನು ನಿರ್ಮಿಸುತ್ತಿರುವ ಹಾಗೂ ಅನುಮತಿ ಪಡೆದ ವ್ಯಾಪ್ತಿಗಿಂತ ಅನಧಿಕೃತವಾಗಿ ಹೆಚ್ಚುವರಿ ಜಾಗಗಳನ್ನು ಒತ್ತುವರಿ ಮಾಡಿಕೊಂಡು ಲೇಔಟ್ ನಿರ್ಮಾಣ ಮಾಡುತ್ತಿರುವ ಕುರಿತು.

ಉತ್ತರ:-

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೂರ್ವ ವಲಯದ ವ್ಯಾಪ್ತಿಯಲ್ಲಿ ವಾರ್ಡ್ ಸಂಖ್ಯೆ: 23 ನಾಗವಾರ ಸುತ್ತಮುತ್ತಲಿನ ಪ್ರದೇಶವು ಒಳಗೊಂಡಿದ್ದು, ಈ ಪ್ರದೇಶದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿರ್ಮಾಣಗೊಂಡಿರುವ ಬಡಾವಣೆಯಲ್ಲಿರುವ ನಿವೇಶನಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಗೊಂಡು ಅವುಗಳಿಗೆ ಖಾತೆ ನೀಡಿ, ಕಂದಾಯ ಪಾವತಿಸಿಕೊಳ್ಳುತ್ತಿರುವ ನಿವೇಶನಗಳಿಗೆ ಹಾಗೂ ನಾಗವಾರ ಸುತ್ತಮುತ್ತಲಿನ ಪ್ರದೇಶದಲ್ಲಿರುವ ಭೂ ಪರಿವರ್ತನೆಗೊಂಡು ವಿಭಜನೆಗೊಳ್ಳದ ರೆವಿನ್ಯೂ ಪ್ರದೇಶದ ಏಕ ನಿವೇಶನಗಳಿಗೆ ನಿಯಮಾನುಸಾರ "ಎ" ಖಾತೆ ನೀಡಿ, ಆಸ್ತಿ ತೆರಿಗೆ ಪಾವತಿಸಿಕೊಳ್ಳುತ್ತಿರುವ ನಿವೇಶನಗಳಿಗೆ ಕಟ್ಟಡ ನಕ್ಷೆ ಮಂಜೂರಾತಿ ನೀಡಿ, ತದನಂತರದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರ ಹಾಗೂ ಸ್ವಾಧೀನಾನುಭವ ಪ್ರಮಾಣ ಪತ್ರಗಳನ್ನು ನೀಡಲಾಗುತ್ತಿರುತ್ತದೆ.

ರೆವಿನ್ಯೂ ಪ್ರದೇಶದಲ್ಲಿ ಭೂಪರಿವರ್ತನೆಗೊಂಡು, ಬಡಾವಣೆ ನಿರ್ಮಾಣಕ್ಕೆ ಅನುಮೋದನೆ ಪಡೆಯದೇ ಬಡಾವಣೆ ರಚಿಸಿರುವ ನಿವೇಶನಗಳಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆದೇಶ ಸಂಖ್ಯೆ: ಉಆ(ಕಂ)ಪಿಆರ್/722/09-10, ದಿನಾಂಕ: 25-08-2009ರಂತೆ ಪಾಲಿಕೆಯ ಆರ್ಥಿಕ ಹಿತದೃಷ್ಟಿಯಿಂದ 'ಬಿ' ವಹಿಯಲ್ಲಿ ದಾಖಲಿಸಿಕೊಂಡು, ಆಸ್ತಿ ತೆರಿಗೆ ಪಾವತಿಸಿಕೊಳ್ಳಲಾಗುತ್ತಿದೆ.

ಮುಂದುವರೆದು, ಸಹಾಯಕ ನಿರ್ದೇಶಕರು (ನಗರ ಯೋಜನೆ-ಪೂರ್ವ) ರವರ ವತಿಯಿಂದ "ಬಿ" ವಹಿಯಲ್ಲಿ ದಾಖಲಿಸಿಕೊಂಡಿರುವ ನಿವೇಶನಗಳಿಗೆ ಯಾವುದೇ ನಕ್ಷೆ ಮಂಜೂರಾತಿಯನ್ನು ನೀಡಲಾಗುತ್ತಿರುವುದಿಲ್ಲ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಬಡಾವಣೆ ನಕ್ಷೆ ಅನುಮೋದನೆಯನ್ನು ಪಡೆದು, ಅನುಮೋದನೆ ಪಡೆದ ವ್ಯಾಪ್ತಿಗಿಂತ ಹೆಚ್ಚುವರಿ ಜಾಗಗಳನ್ನು ಒತ್ತುವರಿ ಮಾಡಿಕೊಂಡು ಬಡಾವಣೆ ನಿರ್ಮಾಣ ಮಾಡುತ್ತಿರುವ ಪ್ರಕರಣಗಳಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿಯಮಾನುಸಾರ ಸೂಕ್ತ ಕ್ರಮಗಳನ್ನು ವಹಿಸಲಾಗುತ್ತದೆ.

---

**ನಅಇ 293 ಬೆಂಆಸೇ 2021**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿಗಳು